ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ. ಬಿಡಿಷಾ ಚೌಧುರಿ, ಐ.ಇ.ಎಸ್. ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿ, ಇವರಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯ ಬಗ್ಗೆ.

ಓದಲಾಗಿದೆ: 1) ಮಾನ್ಯ ಉಪಾಧ್ಯಕ್ಷರು ರಾಜ್ಯ ಯೋಜನಾ ಮಂಡಳಿಯವರ ಟಿಪ್ಪಣಿ ಸಂಖ್ಯೆ: ಎಸ್‌ಪಿಬಿ/ಡಿವೈಸಿ/68/2007, ದಿನಾಂಕ:23.07.2007.

ಪ್ರಸ್ತಾವನೆ:

ಮೇಲೆ ಓದಲಾದ (1)ರ ಟಿಪ್ಪಣಿಯಲ್ಲಿ ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ ಇವರು ಶ್ರೀಮತಿ. ಬಿಡಿಷಾ ಚೌಧುರಿ, ಐ.ಇ.ಎಸ್., ಇವರು ಸಂಶೋಧನಾ ಸಮಾಲೋಚಕರಾಗಿ ರಾಜ್ಯ ಯೋಜನಾ ಮಂಡಳಿಯಲ್ಲಿ ದಿನಾಂಕ:01.06.2007ರಿಂದ ಕಾರ್ಯನಿರ್ವಹಿಸುತ್ತಿರುವುದರಿಂದ ಸದರಿಯವರನ್ನು ಇವರ ಹುದ್ದೆಯ ಕಾರ್ಯಭಾರಗಳನ್ನು ನಿರ್ವಹಿಸುವುದಲ್ಲದೆ ಜಂಟಿ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಎಂದು ನೇಮಕ ಮಾಡಿ, ಸರ್ಕಾರಿ ಆದೇಶ ಸಂಖ್ಯೆ:ಪಿಡಿ 113 ಎಸ್‌ಪಿಎಂ 96, ದಿನಾಂಕ:17/05/1997ರಲ್ಲಿ ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ನು ಸಹ ನೀಡಿ ಆದೇಶ ಹೊರಡಿಸುವಂತೆ ಸೂಚಿಸಿರುವ ಪ್ರಸ್ತಾವನೆಯನ್ನು ಸರ್ಕಾರ ಪರಿಶೀಲಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ:ಪಿಡಿ 56 ಪಿಎಂಎಂ 2007,
ಬೆಂಗಳೂರು, ದಿನಾಂಕ:02ನೇ ಆಗಸ್ಟ್, 2007.

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದಾಗಿ ಶ್ರೀಮತಿ. ಬಿಡಿಷಾ ಚೌಧುರಿ, ಐ.ಇ.ಎಸ್., ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿ, ಇವರನ್ನು ಇವರ ಹುದ್ದೆಯ ಕಾರ್ಯಭಾರಗಳನ್ನೊಳಗೊಂಡಂತೆ **"ಜಂಟಿ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ"** ಎಂದು ಪದನಾಮೀಕರಿಸಿ ಈ ಹುದ್ದೆಗೆ ಸರ್ಕಾರಿ ಆದೇಶ ಸಂಖ್ಯೆ:ಪಿಡಿ 113 ಎಸ್‌ಪಿಎಂ 96, ದಿನಾಂಕ: 17/05/1997ರಲ್ಲಿ ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ನು ಆರ್ಥಿಕ ಇಲಾಖೆಯ ಸಹಮತಿಯನ್ನು ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. S. Shiva Swamy

(ಬಿ.ಎಸ್. ಶಿವಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-1&2 (ಪ್ರ),
ಯೋಜನೆ ಹಾಗೂ ಸಾಂಖ್ಯಿಕ ಇಲಾಖೆ.

ಗೆ:

1. ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ, ಇವರ ಆಪ್ತ ಕಾರ್ಯದರ್ಶಿ.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
3. ಮಾನ್ಯ ಯೋಜನಾ ಸಚಿವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಹಾಗೂ ಸಾಂಖ್ಯಿಕ ಇಲಾಖೆ.
5. ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಯೋಜನಾ ಹಾಗೂ ಸಾಂಖ್ಯಿಕ ಇಲಾಖೆ.
6. ಸರ್ಕಾರದ ಅಧೀನ ಕಾರ್ಯದರ್ಶಿ-3, ಯೋಜನಾ ಮತ್ತು ಸಾಂಖ್ಯಿಕ ಇಲಾಖೆ.
7. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಸಂಬಂಧಪಟ್ಟ ಅಧಿಕಾರಿಗಳಿಗೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.